# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# Karnataka Examinations Authority

ಸಂಖ್ಯೆ: ಇಡಿ/ಕೆಇಎ/ನೇಮಕಾತಿ/2022-23(ಕೆಕೆ) ದಿನಾಂಕ: 10.07.2023
ಸಂಖ್ಯೆ: ಇಡಿ/ಕೆಇಎ/ನೇಮಕಾತಿ/2022-23(ಆರ್‌ಪಿಸಿ) ದಿನಾಂಕ: 10.07.2023

## ತಿದ್ದುಪಡಿ ಅಧಿಸೂಚನೆ

ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇಲ್ಲಿ ಖಾಲಿ ಇರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಬ್ಯಾಕ್ ಲಾಗ್ 10 ಹುದ್ದೆಗಳು, ಕಲ್ಯಾಣ ಕರ್ನಾಟಕ ಪ್ರದೇಶ (ಸ್ಥಳೀಯ) ವೃಂದದ 06 ವಿವಿಧ ಹುದ್ದೆಗಳಿಗೆ ಮತ್ತು ಉಳಿಕೆ ಮೂಲ ವೃಂದದ 10 ಹುದ್ದೆಗಳನ್ನು, ನೇರ ನೇಮಕಾತಿ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ ದಿನಾಂಕ 22.07.2023 ವರೆಗೆ ಅವಕಾಶ ನೀಡಲಾಗಿದೆ.

ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮದ ಪತ್ರ ದಿನಾಂಕ 04.07.2023 ರಲ್ಲಿ ತಿಳಿಸಿರುವಂತೆ, ದಿನಾಂಕ 23.06.2023 ರ ಅಧಿಸೂಚನೆಯಲ್ಲಿ ಸೂಚಿಸಿರುವ ವಯೋಮಿತಿಯನ್ನು ಈ ಕೆಳಗಿನಂತೆ ಓದಿಕೊಳ್ಳತಕ್ಕದ್ದು.

| ಅಭ್ಯರ್ಥಿಗಳು | ಗರಿಷ್ಠ ವಯೋಮಿತಿ |
|---|---|
| ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 35 ವರ್ಷಗಳು |
| ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | 38 ವರ್ಷಗಳು |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ /ಪ್ರವರ್ಗ-1 ಅಭ್ಯರ್ಥಿಗಳಿಗೆ | 40 ವರ್ಷಗಳು |

ಮೇಲಿನ ವಯೋಮಿತಿಯ ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ. ಉಳಿದಂತೆ ಪ್ರಸ್ತುತ ನೇಮಕಾತಿ ಷರತ್ತುಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಗಮನಿಸಿ:

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವುದು ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆಯುವುದು ಅಭ್ಯರ್ಥಿಗಳಿಗೆ ಈ ಮೇಲ್ಕಂಡ ಹುದ್ದೆಗಳ ನೇಮಕಾತಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 (ತಿದ್ದುಪಡಿಗಳು), ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ ನಿಯಮಗಳು) 2021 ಹಾಗು ಕರಾವಿಅನಿನಿ ದ ವೃಂದ ಮತ್ತು ನೇಮಕಾತಿ ಇತರೆ ನಿಯಮಗಳಲ್ಲಿರುವಂತೆ ಅನ್ವಯಿಸುತ್ತದೆ.

ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ಪರೀಕ್ಷಾ ಪ್ರಾಧಿಕಾರ